ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 90 ಸೇಇವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 22.03.2022

## ಸುತ್ತೋಲೆ

**ವಿಷಯ:** ಇಲಾಖಾ ವಿಚಾರಣೆಯಲ್ಲಿನ ವಿಳಂಬವನ್ನು ತಡೆಗಟ್ಟಲು 'ಇಲಾಖಾ ವಿಚಾರಣಾ ಅದಾಲತ್' ನಡೆಸುವ ಬಗ್ಗೆ.

**ಉಲ್ಲೇಖ:**
1. ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 19 ಸೇಇವಿ 2001, ದಿನಾಂಕ:28.06.2001
2. ಸುತ್ತೋಲೆ ಸಂಖ್ಯೆ: ಸಿಆಸುಇ 18 ಸೇಇವಿ 2021, ದಿನಾಂಕ: 04.10.2021
3. ದಿನಾಂಕ: 28.10.2021ರಂದು ನಡೆದ ರಾಜ್ಯ ಮಟ್ಟದ ಜಂಟಿ ಸಮಾಲೋಚನಾ ಸಮಿತಿ ಸಭೆ.

********

**1.** ಸರ್ಕಾರಿ ನೌಕರರ ಮೇಲಿನ ಆಪಾದಿತ ದುರ್ನಡತೆಗೆ ಸಂಬಂಧಿಸಿದಂತೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 11ರಡಿ ಶಿಸ್ತಿನ ಕ್ರಮ ಪ್ರಾರಂಭಿಸಿ ಮುಕ್ತಾಯಗೊಳಿಸಲು ವಿವಿಧ ಹಂತಗಳಿಗಾಗಿ ಉಲ್ಲೇಖ(1)ರ ಅಧಿಕೃತ ಜ್ಞಾಪನದಲ್ಲಿ ಗರಿಷ್ಠ ಕಾಲಮಿತಿಯನ್ನು ನಿಗದಿಪಡಿಸಲಾಗಿದೆ. ಅಲ್ಲದೇ ಸೂಚನೆಗಳನ್ನು ಉಲ್ಲಂಘಿಸುವ ಸರ್ಕಾರಿ ನೌಕರರು ತಾವೇ ಕರ್ತವ್ಯಲೋಪದ ಆಧಾರದ ಮೇಲೆ ಶಿಸ್ತಿನ ಕ್ರಮಕ್ಕೆ ಒಳಪಡಬೇಕಾಗುತ್ತದೆ ಎಂದು ತಿಳಿಸಲಾಗಿದೆ. ಮುಂದುವರೆದು, ಅದೇ ನಿಯಮಗಳ ನಿಯಮ 12ರಡಿ ಶಿಸ್ತುಕ್ರಮ ವಹಿಸಲು ಉಲ್ಲೇಖ(2)ರ ಸುತ್ತೋಲೆಯಲ್ಲಿ ಕಾಲಮಿತಿಯನ್ನು ನಿಗದಿಪಡಿಸಲಾಗಿರುತ್ತದೆ.

**2.** ಸರ್ಕಾರವು ಮೇಲಿನಂತೆ ಕಾಲಮಿತಿಗಳನ್ನು ನಿಗದಿಪಡಿಸಿದ್ದರೂ ಸಹ ಇಲಾಖಾ ವಿಚಾರಣಾ ಪ್ರಕ್ರಿಯೆಗಳು ವಿಳಂಬವಾಗುತ್ತಿರುವುದನ್ನು ಗಮನಿಸಲಾಗಿದೆ. ಇದು ಸರ್ಕಾರಿ ನೌಕರರ ಕರ್ತವ್ಯ ನಿರ್ವಹಣೆಯ ಮೇಲೆ ದುಷ್ಪರಿಣಾಮ ಬೀರುತ್ತಿದೆ.

**3.** ಈ ಹಿನ್ನೆಲೆಯಲ್ಲಿ ಇಲಾಖಾ ವಿಚಾರಣಾ ಪ್ರಕ್ರಿಯೆಯ ವಿಳಂಬವನ್ನು ತಡೆಗಟ್ಟಲು ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಇಲಾಖಾ ಮುಖ್ಯಸ್ಥರು ಪ್ರತಿ ತಿಂಗಳಲ್ಲಿ ಒಂದು ದಿನ 'ಇಲಾಖಾ ವಿಚಾರಣಾ ಅದಾಲತ್' ನಡೆಸುವಂತೆ ಈ ಮೂಲಕ ಸೂಚಿಸಿದೆ. ಈ ಅದಾಲತ್‌ನ ಮೂಲ ಉದ್ದೇಶ ಇಲಾಖಾ ವಿಚಾರಣೆಯಲ್ಲಿನ ವಿಳಂಬವನ್ನು ತಡೆಗಟ್ಟುವುದಾಗಿದ್ದು, ಈ ಕೆಳಗಿನಂತೆ ಕ್ರಮ ವಹಿಸಲು ತಿಳಿಸಿದೆ:

ಕೇಂದ್ರ ಪರಿಹಾರ ಸಮಿತಿ
ಬೆಂಗಳೂರು
ಟಪಾಲು ಸ್ವೀಕೃತಿ ದಿನಾಂಕ [illegible]
ಟಪಾಲು ಸ್ವೀಕೃತಿ ಸಂಖ್ಯೆ 134

(i) ಸದರಿ ದಿನದಂದು ಅವರ ಅಧೀನದಲ್ಲಿನ ಇಲಾಖೆಗಳಲ್ಲಿ ನಡೆಯುತ್ತಿರುವ ಇಲಾಖಾ ವಿಚಾರಣೆಗಳಲ್ಲಿ ವಿಳಂಬವಾಗುತ್ತಿದೆಯೇ, ಒಂದು ವೇಳೆ ವಿಳಂಬವಾಗುತ್ತಿದ್ದಲ್ಲಿ ಅದಕ್ಕೆ ಕಾರಣಗಳೇನು ಎಂಬುದನ್ನು ಪರಿಶೀಲಿಸಬೇಕು.

(ii) ಸಾಮಾನ್ಯವಾಗಿ ಮಂಡನಾಧಿಕಾರಿಗಳು ಸರ್ಕಾರಿ ನೌಕರರೇ ಆಗಿರುತ್ತಾರಾದ್ದರಿಂದ ಅವರಿಂದ ಈ ಸುತ್ತೋಲೆಗೆ ಲಗತ್ತಿಸಲಾದ ನಮೂನೆ ಮಾದರಿಯಲ್ಲಿ ವಿವರಗಳನ್ನು ಪಡೆದು, ಯಾವ ಹಂತದಲ್ಲಿ ವಿಳಂಬವಾಗುತ್ತಿದೆಯೋ ಅದನ್ನು ಸರಿಪಡಿಸಲು ಸೂಚನೆಗಳನ್ನು ನೀಡಬೇಕು. ಅಗತ್ಯ ಬಿದ್ದಲ್ಲಿ ವಿಚಾರಣಾಧಿಕಾರಿಗಳು, ಮಂಡನಾಧಿಕಾರಿಗಳು ಹಾಗೂ ಆಪಾದಿತ ಸರ್ಕಾರಿ ನೌಕರರಿಗೆ ಕಾಲಮಿತಿಯಲ್ಲಿ ಇಲಾಖಾ ವಿಚಾರಣೆಯನ್ನು ಪೂರ್ಣಗೊಳಿಸಲು ನಿರ್ದೇಶನಗಳನ್ನು ನೀಡಬೇಕು.

(iii)ಇಲಾಖಾ ಹಂತದಲ್ಲಿ ಇಲಾಖಾ ವಿಚಾರಣಾ ಕಡತ ನಿರ್ವಹಣೆಯಲ್ಲಿ ವಿಳಂಬವಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಿ, ಯಾವ ಹಂತದಲ್ಲಿ ವಿಳಂಬವಾಗುತ್ತಿದೆಯೋ ಅವರಿಗೆ ಸೂಕ್ತ ಸಲಹೆಗಳನ್ನು ನೀಡಬೇಕು.

(iv) ಹಲವು ಸೂಚನೆಗಳ ಬಳಿಕವೂ ವಿಳಂಬ ಉಂಟಾಗುತ್ತಿದ್ದಲ್ಲಿ ಉಲ್ಲೇಖ(1)ರ ಅಧಿಕೃತ ಜ್ಞಾಪನದಲ್ಲಿ ತಿಳಿಸಿರುವಂತೆ ವಿಳಂಬಕ್ಕೆ ಕಾರಣರಾಗುವ ಅಂತಹ ಸರ್ಕಾರಿ ನೌಕರರ ವಿರುದ್ಧವೇ ಕರ್ತವ್ಯಲೋಪದ ಆಧಾರದ ಮೇಲೆ ಶಿಸ್ತಿನ ಕ್ರಮ ಪ್ರಾರಂಭಿಸಬೇಕು.

(v) ವಿಚಾರಣಾಧಿಕಾರಿಗಳಾಗಿ ನಿವೃತ್ತ ಸರ್ಕಾರಿ ನೌಕರರನ್ನು ನೇಮಿಸಿದ್ದಲ್ಲಿ ಹಾಗೂ ಯಾವುದಾದರೂ ನಿರ್ದಿಷ್ಟ ವಿಚಾರಣಾಧಿಕಾರಿಯಿಂದ ಇಲಾಖಾ ವಿಚಾರಣೆಯಲ್ಲಿ ವಿಳಂಬವಾಗುತ್ತಿದ್ದಲ್ಲಿ, ಅಂತಹ ವಿಚಾರಣಾಧಿಕಾರಿಗಳನ್ನು ಗುರುತಿಸಿ ಮುಂದಿನ ಯಾವುದೇ ಇಲಾಖಾ ವಿಚಾರಣೆಗಳನ್ನು ಅಂತಹವರಿಗೆ ವಹಿಸದಂತೆ ಎಚ್ಚರಿಕೆ ವಹಿಸಬೇಕು.

(vi) ನಿವೃತ್ತ ಸರ್ಕಾರಿ ನೌಕರರ ವಿರುದ್ಧದ ಇಲಾಖಾ ವಿಚಾರಣೆಗಳಲ್ಲಿ ಅವರಿಂದ ಸದರಿ ಪ್ರಕರಣದಲ್ಲಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿ ಆ ಮೊತ್ತದ ವಸೂಲಾತಿಗೆ ಅವಕಾಶವಿರುವುದು ಅಥವಾ ಅವರಿಂದ ಘೋರ ನಿರ್ಲಕ್ಷದ ಅಪರಾಧ ಉಂಟಾಗಿರುವುದು ಆಪಾದನೆಯಾಗಿದೆಯೇ ಎಂಬುದನ್ನು ಪರಿಶೀಲಿಸಬೇಕು. ಇಲ್ಲವೆಂದಾದಲ್ಲಿ ಅಂತಹ ಇಲಾಖಾ ವಿಚಾರಣೆಗಳನ್ನು ಮುಕ್ತಾಯಗೊಳಿಸಲು ಸೂಕ್ತ ಕ್ರಮ ವಹಿಸಬೇಕು. ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ವಹಿಸಿಕೊಡಲಾದ ಇಲಾಖಾ ವಿಚಾರಣೆಗಳನ್ನು ಮೇಲಿನಂತೆ ಪರಿಶೀಲಿಸುವುದು.

4. ಮೇಲೆ ತಿಳಿಸಲಾದ ಕ್ರಮಗಳು ಸೂಚಕವಾಗಿದ್ದು, ಚಾಲ್ತಿಯಲ್ಲಿರುವ ನಿಯಮಗಳು ಮತ್ತು ಕಾಲಕಾಲಕ್ಕೆ ಸರ್ಕಾರದಿಂದ ಹೊರಡಿಸಲಾಗುವ ಆದೇಶಗಳ ವ್ಯಾಪ್ತಿಯಲ್ಲಿ ಇಲಾಖಾ ವಿಚಾರಣಾ ಪ್ರಕ್ರಿಯೆ ಕಾಲಮಿತಿಯಲ್ಲಿ ಪೂರ್ಣಗೊಳ್ಳುವಂತೆ ಕ್ರಮ ಕೈಗೊಳ್ಳಲು ಸೂಚಿಸಿದೆ.

22/03/2022

(ನಾಗರತ್ನ ವಿ.ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:-

ಸಂಕಲನಕಾರರು, ಕರ್ನಾಟಕ e-ರಾಜ್ಯ ಪತ್ರ.

ಪ್ರತಿಯನ್ನು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
4. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
8. ಎಲ್ಲಾ ಇಲಾಖಾ ಮುಖ್ಯಸ್ಥರು
9. ಎಲ್ಲಾ ಪ್ರಾದೇಶಿಕ ಆಯುಕ್ತರು

10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
11. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
12. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು
17. ರಕ್ಷಾ ಕಡತ/ಬಿಡಿ ಪ್ರತಿಗಳು.

(*ಪ್ರತ್ಯೇಕ ಪತ್ರದೊಂದಿಗ)